# ಕರ್ನಾಟಕ ಸರ್ಕಾರ
## (ತಾಂತ್ರಿಕ ಶಿಕ್ಷಣ ಇಲಾಖೆ)

ಸಂ:ಬಿಟಿಇ 01 ಇಎಪಿ 2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:05/02/2018.

## ಜ್ಞಾಪನ

ವಿಷಯ: ಕೆ.ಐ.ಇ.ಟಿ. ಪಾಲಿಟೆಕ್ನಿಕ್(394), ಬೆಂಗಳೂರು ಈ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳ ಮರು ಮೌಲ್ಯಮಾಪನ ಶುಲ್ಕ, ಉತ್ತರ ಪತ್ರಿಕೆಯ ಫೋಟೋ ಪ್ರತಿ ಶುಲ್ಕ ಹಾಗೂ ಏಪ್ರಿಲ್/ಮೇ 2018 ರ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂ:ಬಿಟಿಇ 01 ಇಎಪಿ 2017 ದಿನಾಂಕ:24/01/2018.

*****

ಉಲ್ಲೇಖದಲ್ಲಿ ಕಾಣಿಸಿರುವ ಈ ಕಛೇರಿಯ ಸುತ್ತೋಲೆಯಲ್ಲಿ ಈಗಾಗಲೇ ನವೆಂಬರ್/ಡಿಸೆಂಬರ್ 2017 ರ ಪರೀಕ್ಷಾ ಫಲಿತಾಂಶವನ್ನು ದಿನಾಂಕ:25/01/2018 ರಂದು ಪ್ರಕಟಿಸಲಾಗಿದೆ. ಕೆ.ಐ.ಇ.ಟಿ. ಪಾಲಿಟೆಕ್ನಿಕ್,(394) ಬೆಂಗಳೂರು ಈ ವಿದ್ಯಾ ಸಂಸ್ಥೆಯ ಯಾವುದಾದರು ವಿದ್ಯಾರ್ಥಿಗಳು ಅವರು ನವೆಂಬರ್/ಡಿಸೆಂಬರ್ 2017 ರ ಸೆಮಿಸ್ಟರ್ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿಷಯಗಳಿಗೆ, ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಮತ್ತು ಉತ್ತರ ಪತ್ರಿಕೆಯ ಫೋಟೋ ಪ್ರತಿ ಪಡೆಯಲು ಬಯಸಿದರೆ ಅಂತಹ ವಿದ್ಯಾರ್ಥಿಗಳಿಗೆ ದಿನಾಂಕ:07/02/2018 ರವರೆಗೆ ಕಾಲಾವಕಾಶ ನೀಡಲಾಗಿದೆ. ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇ ಲಿಂಕ್ಸ್ ಆನ್‌ಲೈನ್ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ. ಇದಲ್ಲದೆ ಅನುತ್ತೀರ್ಣಗೊಂಡಿರುವ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ 2018 ರ ಸೆಮಿಸ್ಟರ್ ಪರೀಕ್ಷೆ ತೆಗೆದುಕೊಳ್ಳಲು ನಿಗಧಿತ ಪರೀಕ್ಷಾ ಶುಲ್ಕವನ್ನು ಖಜಾನೆಗೆ/ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಪಾವತಿಸಿ, ತಮ್ಮ ಸಂಸ್ಥೆಯಿಂದಲೇ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇ ಲಿಂಕ್ಸ್ ಆನ್‌ಲೈನ್ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

ಪ್ರಿನ್ಸಿಪಾಲರು,
ಕೆ.ಐ.ಇ.ಟಿ. ಪಾಲಿಟೆಕ್ನಿಕ್(394),
ಬೆಂಗಳೂರು – ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

eap sv